**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ** 1059/2021 **CW**-1 **PW**-1

**ಸಾಕ್ಷಿಯನ್ನು ದಿಃ** 08.04.2026 **ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ರಾಧ |
| ಗಂಡನ ಹೆಸರುಃ | ದೇವರಾಜು |
| ವಯಸ್ಸುಃ | 50 ವರ್ಷ |
| ವೃತ್ತಿಃ | ಗೃಹಿಣಿ |
| ವಾಸ ಸ್ಥಳಃ | ಸಾಸಲುಪುರ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-2 ನನ್ನ ಗಂಡ. ಚಾಸಾ-3 ರಿಂದ ಚಾಸಾ-5 ರವರ ಪರಿಚಯವಿದೆ. ಆರೋಪಿತರ ಪರಿಚಯವಿದೆ.

ದಿಃ 17.04.2021 ರಂದು ಮದ್ಯಾಹ್ನ 12.30 ರ ಸಮಯದಲ್ಲಿ ನಾನು ಮತ್ತು ಚಾಸಾ-2 ರವರು ನನ್ನ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ಆರೋಪಿತರು ನಮ್ಮ ಜಮೀನಿನಲ್ಲಿ ಕುರಿಗಳನ್ನು ಹಿಡಿದುಕೊಂಡು ಹೋಗುತ್ತಿದ್ದು, ಆ ಕುರಿಗಳು ನಮ್ಮ ಜಮೀನಿನ ಜೋಳ ತಿನ್ನುತ್ತಿದ್ದು, ನಾನು ಓಡಿಸುತ್ತಿದ್ದಾಗ 1ನೇ ಆರೋಪಿ ಕಲ್ಲಿನಿಂದ ನನ್ನ ಗದ್ದಕ್ಕೆ ಮತ್ತು ಎಡಕೈ ಹೆಬ್ಬೆಟ್ಟಿಗೆ ಹೊಡೆದಿರುತ್ತಾರೆ. 2ನೇ ಆರೋಪಿ ಕೈಯಿಂದ ನನ್ನ ಮೈ ಕೈ ಮೇಲೆ ಹೊಡೆದು, ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿರುತ್ತಾರೆ. ಅಷ್ಟರಲ್ಲಿ ಚಾಸಾ-2 ಮತ್ತು 3 ರವರು ಅಲ್ಲಿಗೆ ಬಂದು ಜಗಳ ಬಿಡಿಸಿರುತ್ತಾರೆ. ನಂತರ ಸಂಜೆ 7.00 ಗಂಟೆಗೆ ಚನ್ನರಾಯಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಚಾಸಾ-2 ರವರು ಕರೆದುಕೊಂಡು ಬಂದಿರುತ್ತಾರೆ. ಪೋಲೀಸರು ಆಸ್ಪತ್ರಗೆ ಬಂದು ನನ್ನಿಂದ ಹೇಳಿಕೆ ದೂರನ್ನು ಪಡೆದಿರುತ್ತಾರೆ.

ಸಾಕ್ಷಿಗೆ ಹೇಳಿಕೆ ದೂರನ್ನು ತೋರಿಸಲಾಗಿ, ಅದನ್ನು ಅವರು ನೋಡಿ ಗುರುತಿಸಿದ್ದು, ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಮರು ದಿನ ಪೋಲೀಸರು ಬಂದಿದ್ದು, ನಾನು ಪೋಲೀಸರಿಗೆ ಸ್ಥಳ ತೋರಿಸಿದ್ದು ಅದರಂತೆ ಅವರು ಮಹಜರ್ ಕ್ರಮವನ್ನು ಮಧ್ಯಾಹ್ನ 1.00 ರಿಂದ 2.00 ಗಂಟೆ ಸಮಯದಲ್ಲಿ ನನ್ನ, ಚಾಸಾ-3 ಮತ್ತು ಚಾಸಾ-4 ರವರ ಸಮಕ್ಷಮ ಜರುಗಿಸಿ ನನ್ನಿಂದ ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿ ನ್ಯಾಯಾಲಯದಲ್ಲಿರುವ ಕಲ್ಲನ್ನು ನೋಡಿ ಗುರುತಿಸಿದ್ದು ಅದನ್ನು ಮು ಮಾ-1 ಎಂದು ಗುರುತಿಸಲಾಯಿತು.

ಪೋಲೀಸರಿಗೆ ನಾನು ಮರು ಹೇಳಿಕೆ ನೀಡಿರುತ್ತೇನೆ. ಸಾಕ್ಷಿ ನ್ಯಾಯಾಲಯದಲ್ಲಿರುವ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ  ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಮಧ್ಯಾಹ್ನ 12.00 ರಿಂದ 1.00 ಗಂಟೆ ಸಮಯದಲ್ಲಿ ಮಹಜರ್ ಕ್ರಮ ಜರುಗಿಸಿದ್ದು ಆ ಸಮಯದಲ್ಲಿ ಚಾಸಾ-5 ರವರು ಸಹ ಸ್ಥಳದಲ್ಲಿದ್ದರು ಎಂದರೆ ಸರಿ.

**ಪಾಟೀ ಸವಾಲುಃ  ಆರೋಪಿ ಪರ ವಕೀಲರಾದ ಶ್ರೀ ಕೆ ಎನ್ ಕೆ ರವರಿಂದ ಃ**

ಆರೋಪಿತರು ನನ್ನ ಭಾವ ಮತ್ತು ಅಕ್ಕ ಎಂದರೆ ಸರಿ. ನಮ್ಮ ಮತ್ತು ಆರೋಪಿತರ ನಡುವೆ ವಿಭಾಗವಾಗಿ ಬೇರೆ ಬೇರೆ ವಾಸವಿದ್ದೇವೆ ಎಂದರೆ ಸರಿ. ಅದರಂತೆ ನಾವು ನಮ್ಮ

ಜಮೀನುಗಳಲ್ಲಿ ಹಾದುಹೋಗುತ್ತೇವೆ ಎಂದರೆ ಸರಿ. ನಾನು ಏನು ಹೇಳಿದ್ದೇನೆ ಅದನ್ನು ನಿಪಿ–1 ರಲ್ಲಿ ಬರೆದಿರುತ್ತಾರೆ. ಮದ್ಯಾಹ್ನ 2.30 ರ ಸಮಯದಲ್ಲಿ ನಾನು ಜಮೀನಿನ ಬಳಿ ಕೆಲಸ ಮಾಡುತ್ತಿದ್ದಾಗ ಆರೋಪಿತರು ಅಲ್ಲಿಗೆ ಬಂದಿರುತ್ತಾರೆ ಎಂದು ಹೇಳಿದ್ದೇನೆ. ನಮ್ಮ ಊರಿಗೆ ಚನ್ನರಾಯಪಟ್ಟಣ 4–5 ಕಿ. ಮೀ ಅಂತರವಿದೆ. ಅಲ್ಲಿಂದ ಇಲ್ಲಿಗೆ ಬರಲು ¼ ಗಂಟೆ ಬೇಕಾಗುತ್ತದೆ. ನಮ್ಮ ವಿರುದ್ಧ ಆರೋಪಿತರು ದೂರು ನೀಡಿರುತ್ತಾರೆ ಎಂದರೆ ಸರಿ. ನಾವು ಮದ್ಯಾಹ್ನ 12.30 ರ ಸಮಯದಲ್ಲಿ 1ನೇ ಆರೋಪಿಯನ್ನು ಉದ್ದೇಶಿಸಿ ಅವಾಚ್ಯ ಶಬ್ದಗಳಿಂದ ಬೈದು, ಚಾಸಾ–2 ರವರು 1ನೇ ಆರೋಪಿಯನ್ನು ತಬ್ಬಿ ಹಿಡಿದುಕೊಂಡಿದ್ದು, ನಾನು 1ನೇ ಆರೋಪಿಯ ಹಣೆಗೆ ಮತ್ತು ಬಲಭುಜಕ್ಕೆ ಹೊಡೆದು ರಕ್ತಗಾಯಪಡಿಸಿ, ಕೊಲೆ ಬೆದರಿಕೆ ಹಾಕಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರು ನಮ್ಮ ವಿರುದ್ಧ ದೂರು ನೀಡಿದ ನಂತರ ಅದರ ಪ್ರತೀಕಾರವಾಗಿ ನಾವು ಈ ದೂರನ್ನು ನೀಡಿದ್ದೇವೆ ಎಂದರೆ ಸರಿಯಲ್ಲ. ಆರೋಪಿತರು ನಮ್ಮ ಮೇಲೆ ಯಾವುದೇ ಗಲಾಟೆ ಮಾಡಿಲ್ಲದಿದ್ದರು ಅವರ ವಿರುದ್ಧ ಸುಳ್ಳು ದೂರು ನೀಡಿದ್ದೇನೆ ಎಂದರೆ ಸರಿಯಲ್ಲ.

ನಾನು ಪೋಲೀಸರಿಗೆ ಮುಂದುವರೆದ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಮಹಜರ್ ಸಮಯದಲ್ಲಿ 7–8 ಜನ ಸೇರಿದ್ದರು. ನಿಪಿ–2 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಮು ಮಾ–1 ರೀತಿಯ ಕಲ್ಲುಗಳು ಎಲ್ಲಾ ಕಡೆ ದೊರೆಯುತ್ತವೆ ಎಂದರೆ ಸರಿ. ಮು ಮಾ–1 ಕ್ಕೆ ಯಾವುದೇ ಗುರುತು ಇಟ್ಟಿಲ್ಲ. ಪೋಲೀಸರು ಸ್ಥಳಕ್ಕೆ ಬಂದಿಲ್ಲ. ಮಹಜರ್ ಕ್ರಮ ಜರುಗಿಸಿಲ್ಲ, ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ, ನಿಪಿ–2 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಮಹಜರ್ ಗೆ ನಾನು ಆಸ್ಪತ್ರೆಯಲ್ಲಿ ಸಹಿ ಮಾಡಿರುತ್ತೇನೆ. ನಮ್ಮ ಮತ್ತು ಆರೋಪಿತರ ನಡುವೆ ಈ ಘಟನೆ

ನಡೆದಾಗಿನಿಂದ ವೈಮನಸ್ಸು ಇದೆ. ಮು ಮಾ–1 ರಿಂದ ಯಾವುದೇ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ಸುಳ್ಳು ದೂರು ನೀಡಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

(ಕುಸುಮ ವಿ.)
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**